# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** **'ಪ್ರಧಾನ ಮಂತ್ರಿ ಬೀದಿ ವ್ಯಾಪಾರಿಗಳ ಆತ್ಮ ನಿರ್ಭರ್ ನಿಧಿ'** ಯೋಜನೆಯಡಿ ಗುರುತಿಸಲ್ಪಟ್ಟ ಬೀದಿ ವ್ಯಾಪಾರಸ್ಥರ ಕುಟುಂಬಗಳ ಸಮಗ್ರ ಅಭಿವೃದ್ಧಿಗಾಗಿ ಸಾಮಾಜಿಕ ಮತ್ತು ಆರ್ಥಿಕ ಸಮೀಕ್ಷೆಯನ್ನು 2ನೇ ಹಂತದಲ್ಲಿ 4 ನಗರಗಳಲ್ಲಿ ವಿಸ್ತರಿಸಿ ಜಾರಿಗೊಳಿಸುವ ಕುರಿತು.

**ಓದಲಾಗಿದೆ:**
1. ಸರ್ಕಾರದ ಆದೇಶ ಸಂ.ಕೌಉಜೀಇ 144 ಉಜೀಇ 2020 ದಿನಾಂಕ:15.06.2020.
2. ಸರ್ಕಾರರದ ಆದೇಶ ಸಂಖ್ಯೆ: ಕೌಉಜೀಇ 02 ಉಜೀಇ 2021 ದಿನಾಂಕ: 05.01.2021
3. ಅಧೀನ ಕಾರ್ಯದರ್ಶಿಗಳು, ಕೇಂದ್ರ ವಸತಿ ಮತ್ತು ನಗರ ವ್ಯವಹಾರಗಳ ಮಂತ್ರಾಲಯ, ಭಾರತ ಸರ್ಕಾರ ನವದೆಹಲಿ ಇವರ ಪತ್ರ ಸಂ:K-12012/04/2020-PMSVANidhi(9095711), ದಿ: 10-03-2022

*****

**ಪ್ರಸ್ತಾವನೆ:**

ಮೇಲೆ ಓದಲಾದ ಕ್ರಮ ಸಂಖ್ಯೆ(1) ರಲ್ಲಿ ರಾಜ್ಯದ 277 ನಗರ ಸ್ಥಳೀಯ ಸಂಸ್ಥೆಗಳಲ್ಲಿ 'ಪ್ರಧಾನ ಮಂತ್ರಿ ಬೀದಿ ವ್ಯಾಪಾರಿಗಳ ಆತ್ಮ ನಿರ್ಭರ್ ನಿಧಿ' (PM SVA Nidhi) ಯೋಜನೆಯನ್ನು ಅನುಷ್ಠಾನಗೊಳಿಸಿ ಆದೇಶಿಸಲಾಗಿದೆ.

ಮೇಲೆ ಓದಲಾದ ಕ್ರಮ ಸಂಖ್ಯೆ (2) ರಲ್ಲಿ 'ಪ್ರಧಾನ ಮಂತ್ರಿ ಬೀದಿ ವ್ಯಾಪಾರಿಗಳ ಆತ್ಮ ನಿರ್ಭರ್ ನಿಧಿ' (PM SVA- Nidhi) ಯೋಜನೆಯಡಿ ಬೀದಿ ವ್ಯಾಪಾರಿಗಳ ಕುಟುಂಬಗಳ ಸಮಗ್ರ ಅಭಿವೃದ್ಧಿಗಾಗಿ, ರಾಜ್ಯದ ಆಯ್ದ 07 ನಗರಗಳಲ್ಲಿ ಗುರುತಿಸಲ್ಪಟ್ಟ ಬೀದಿ ಬದಿ ವ್ಯಾಪಾರಿಗಳಿಗೆ ಹಾಗೂ ಸದರಿಯವರ ಕುಟುಂಬದವರಿಗೆ ಸರ್ಕಾರದ ಇತರೆ ಯೋಜನೆಗಳನ್ನು ತಲುಪಿಸುವ ಉದ್ದೇಶದಿಂದ ದಿನಾಂಕ:01.01.2021ರಿಂದ ಸಾಮಾಜಿಕ ಮತ್ತು ಆರ್ಥಿಕ ಸಮೀಕ್ಷೆಯನ್ನು ಕೈಗೊಳ್ಳುವಂತೆ ಆದೇಶಿಸಲಾಗಿದೆ.

ಮೇಲೆ ಓದಲಾದ ಕ್ರಮ ಸಂಖ್ಯೆ(3) ರಲ್ಲಿ ಪಿಎಂ ಸ್ವನಿಧಿ ಯೋಜನೆಯು ಬೀದಿ ವ್ಯಾಪಾರಿಗಳ ಕುಟುಂಬಗಳನ್ನು ತಲುಪಲು 2ನೇ ಹಂತದಲ್ಲಿ ಆಯ್ದ 126 ನಗರ ಸ್ಥಳೀಯ ಸಂಸ್ಥೆಗಳಲ್ಲಿ ವಿಸ್ತರಿಸುವಂತೆ ತಿಳಿಸಲಾಗಿದೆ.

ಆದ್ದರಿಂದ, 2ನೇ ಹಂತದಲ್ಲಿ ಆಯ್ಕೆಯಾದ ರಾಜ್ಯದ 4 ನಗರಗಳಲ್ಲಿ ಗುರುತಿಸಲ್ಪಟ್ಟ ಬೀದಿ ಬದಿ ವ್ಯಾಪಾರಿಗಳಿಗೆ ಹಾಗೂ ಸದರಿಯವರ ಕುಟುಂಬದವರಿಗೆ ಸರ್ಕಾರದ ಇತರೆ ಯೋಜನೆಗಳನ್ನು ತಲುಪಿಸುವ ಉದ್ದೇಶದಿಂದ ಸಾಮಾಜಿಕ ಮತ್ತು ಆರ್ಥಿಕ ಸಮೀಕ್ಷೆಯನ್ನು ಕೈಗೊಳ್ಳಲು ಹಾಗೂ ಯೋಜನೆಯ ಅನುಷ್ಠಾನಕ್ಕೆ ಅನುಮೋದನೆ ನೀಡಿ ಈ ಕೆಳಕಂಡಂತೆ ಆದೇಶಿಸಲಾಗಿದೆ.

**ಸರ್ಕಾರಿ ಆದೇಶ ಸಂಖ್ಯೆ ಕೌಉಜೀಇ 02 ಉಜೀಇ 2021 ಬೆಂಗಳೂರು, ದಿನಾಂಕ: 12.04.2022**

ಮೇಲೆ ಪ್ರಸ್ತಾವನೆಯಲ್ಲಿ ವಿವರಿಸಿರುವ ಹಿನ್ನೆಲೆಯಲ್ಲಿ, 2ನೇ ಹಂತದಲ್ಲಿ ಆಯ್ಕೆಯಾದ ರಾಜ್ಯದ ಆಯ್ದ 04 ನಗರಗಳಲ್ಲಿ ಬೀದಿ ವ್ಯಾಪಾರಿಗಳ ಕುಟುಂಬಗಳ ಸಮಗ್ರ ಅಭಿವೃದ್ಧಿಗಾಗಿ ಸಾಮಾಜಿಕ ಮತ್ತು ಆರ್ಥಿಕ ಸಮೀಕ್ಷೆಯನ್ನು ಕೈಗೊಳ್ಳಲು ಆದೇಶಿಸಲಾಗಿದೆ.

. . . . 2/-

**ಯೋಜನೆ ವ್ಯಾಪ್ತಿ:**

- ಈ ಯೋಜನೆಯ 2ನೇ ಹಂತದಲ್ಲಿ, ಆಯ್ದ 126 ನಗರ ಸ್ಥಳೀಯ ಸಂಸ್ಥೆಗಳಲ್ಲಿ ಪಿಎಂ ಸ್ವನಿಧಿ ಯೋಜನೆಯು ಬೀದಿಬದಿ ವ್ಯಾಪಾರಿಗಳ ಕುಟುಂಬಗಳನ್ನು ತಲುಪುವ ಗುರಿಯನ್ನು ಹೊಂದಿದ್ದು, ಈ ಪೈಕಿ ಕರ್ನಾಟಕ ರಾಜ್ಯದಲ್ಲಿ 2ನೇ ಹಂತದಲ್ಲಿ ಸಮೀಕ್ಷೆಯನ್ನು ಕೈಗೊಳ್ಳಲು ಈ ಕೆಳಕಂಡ 04 ನಗರ ಸ್ಥಳೀಯ ಸಂಸ್ಥೆಗಳನ್ನು ಆಯ್ಕೆ ಮಾಡಲಾಗಿದೆ.

| ವಿಭಾಗದ ಹೆಸರು | ಆಯ್ಕೆಯಾದ ನಗರ ಸ್ಥಳೀಯ ಸಂಸ್ಥೆಯ ಹೆಸರು |
|---|---|
| ಮೈಸೂರು ವಿಭಾಗ | 1) ಮಹಾನಗರ ಪಾಲಿಕೆ ಮಂಗಳೂರು. |
| ಬೆಂಗಳೂರು ವಿಭಾಗ | 2) ಬೃಹತ್ ಮಹಾನಗರ ಪಾಲಿಕೆ, ಬೆಂಗಳೂರು. |
| ಕಲಬುರಗಿ ವಿಭಾಗ | 3) ಮಹಾನಗರ ಪಾಲಿಕೆ, ಕಲಬುರಗಿ. |
| | 4) ನಗರಸಭೆ, ರಾಯಚೂರು. |

ಪಿಎಂ ಸ್ವನಿಧಿ ಯೋಜನೆಯ ಫಲಾನುಭವಿಗಳ ಮತ್ತು ಅವರ ಕುಟುಂಬಗಳ ಮಾಹಿತಿ ಮತ್ತು ವಿವರವನ್ನು ಸಾಮಾಜಿಕ ಮತ್ತು ಆರ್ಥಿಕ ಸಮೀಕ್ಷೆಯಲ್ಲಿ ಈ ಕೆಳಕಂಡಂತೆ ಸಂಗ್ರಹಿಸುವುದು.

ಎ) ವಸತಿ ಮತ್ತು ಇತರೆ ಸ್ವತ್ತುಗಳು
ಬಿ) ಆರೋಗ್ಯ ವ್ಯಾಪ್ತಿ ಮತ್ತು ವಿಕಲಚೇತನದ ಸ್ಥಿತಿ-ಗತಿ.
ಸಿ) ಶಿಕ್ಷಣ, ಕೌಶಲ್ಯ ಮತ್ತು ಉದ್ಯೋಗ.
ಡಿ) ಮಹಿಳಾ ಮತ್ತು ಮಕ್ಕಳ ಕಲ್ಯಾಣ.
ಇ) ಬ್ಯಾಂಕ್ ಮತ್ತು ವಿಮೆ
ಎಫ್) ವಲಸೆಯ ಸ್ಥಿತಿ (Migration Status)
ಜಿ) ಕುಟುಂಬ ಸದಸ್ಯರ ಉದ್ಯೋಗದ ಸ್ಥಿತಿ
ಹೆಚ್) ಆಕಾಂಕ್ಷೆಗಳ ಸಮೀಕ್ಷೆ
ಐ) ಇತರೆ ಸಂಬಂಧಿತ ಕ್ಷೇತ್ರಗಳು.

**ಜಿಲ್ಲಾ ಮಟ್ಟದ ಮೇಲ್ವಿಚಾರಣಾ ಸಮಿತಿ:**

| ಕ್ರ. ಸಂ. | ಇಲಾಖೆ | ಹುದ್ದೆ |
|---|---|---|
| 1 | ಜಿಲ್ಲಾಧಿಕಾರಿಗಳು | ಅಧ್ಯಕ್ಷರು |
| 2 | ಅಪರ ಜಿಲ್ಲಾಧಿಕಾರಿಗಳು | ಸದಸ್ಯರು |
| 3 | ಜಿಲ್ಲಾ ಆಹಾರ ಮತ್ತು ನಾಗರೀಕ ಸರಬರಾಜು ಇಲಾಖೆಯ ಅಧಿಕಾರಿ | ಸದಸ್ಯರು |
| 4 | ಜಿಲ್ಲಾ ಶಿಕ್ಷಣಾಧಿಕಾರಿ | ಸದಸ್ಯರು |
| 5 | ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ | ಸದಸ್ಯರು |
| 6 | ಜಿಲ್ಲಾ ಸಮಾಜ ಕಲ್ಯಾಣಾಧಿಕಾರಿ | ಸದಸ್ಯರು |
| 7 | ಜಿಲ್ಲಾ ಲೀಡ್ ಬ್ಯಾಂಕ್ ವ್ಯವಸ್ಥಾಪಕರು | ಸದಸ್ಯರು |
| 8 | ಜಿಲ್ಲಾಧಿಕಾರಿಗಳು ಸೂಚಿಸುವ ಇತರೆ ಇಲಾಖೆಗಳ ಅಧಿಕಾರಿಗಳು | ಸದಸ್ಯರು |
| 9 | ಆಯುಕ್ತರು/ ಪೌರಾಯುಕ್ತರು ಸಂಬಂಧಪಟ್ಟ ನಗರ ಸ್ಥಳೀಯ ಸಂಸ್ಥೆ | ಸದಸ್ಯ ಕಾರ್ಯದರ್ಶಿ |

..3/-

ರಾಜ್ಯ ಮಟ್ಟದ ಹಾಗೂ ಜಿಲ್ಲಾ ಮಟ್ಟದ ಮೇಲ್ವಿಚಾರಣಾ ಸಮಿತಿಗಳು ನಗರದ ಬೀದಿ ವ್ಯಾಪಾರಸ್ಥರ ಕುಟುಂಬಗಳ ಸಾಮಾಜಿಕ ಮತ್ತು ಆರ್ಥಿಕ ಸಮೀಕ್ಷೆಯ ಯೋಜನೆಯನ್ನು ಸಂಬಂಧಪಟ್ಟ ಜಿಲ್ಲೆಯ ಆಯ್ಕೆಯಾದ ನಗರ ಸ್ಥಳೀಯ ಸಂಸ್ಥೆಯಲ್ಲಿ ಅನುಷ್ಠಾನ, ಮೇಲ್ವಿಚಾರಣೆ ಮತ್ತು ಇತರೆ ಅಂಶಗಳ ಕುರಿತು ಪರಿಶೀಲಿಸುವ ಕಾರ್ಯವನ್ನು ನಿರ್ವಹಿಸುವುದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

12/04/2022

(ರಂಗನಾಥ)
ಸರ್ಕಾರದ ಅಧೀನ ಕಾರ್ಯದರ್ಶಿ,
ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು
ಜೀವನೋಪಾಯ ಇಲಾಖೆ

ಇವರಿಗೆ:

1. ಮಹಾಲೇಖಪಾಲರು ಕರ್ನಾಟಕ, ಬೆಂಗಳೂರು.
2. ಸರ್ಕಾರದ ಮುಖ್ಯ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
3. ಅಪರ ಮುಖ್ಯ ಕಾರ್ಯದರ್ಶಿಗಳು ಮತ್ತು ಅಭಿವೃದ್ಧಿ ಆಯುಕ್ತರು, ವಿಧಾನಸೌಧ, ಬೆಂಗಳೂರು.
4. ಪ್ರಧಾನ ಕಾರ್ಯದರ್ಶಿ/ ಕಾರ್ಯದರ್ಶಿ, ಆರ್ಥಿಕ ಇಲಾಖೆ, ವಿಧಾನ ಸೌಧ.
5. ಎಲ್ಲಾ ಕಾರ್ಯದರ್ಶಿಗಳು/ ಪ್ರಧಾನ ಕಾರ್ಯದರ್ಶಿಗಳು / ಅಪರ ಮುಖ್ಯ ಕಾರ್ಯದರ್ಶಿಗಳು/ ಕಾರ್ಯದರ್ಶಿಗಳು.
6. ಆಯುಕ್ತರು, ಬಿ.ಬಿ.ಎಂ.ಪಿ., ಬೆಂಗಳೂರು.
7. ಜಂಟಿ ಕಾರ್ಯದರ್ಶಿಗಳು, ಕೇಂದ್ರ ವಸತಿ ಮತ್ತು ನಗರ ವ್ಯವಹಾರಗಳ ಮಂತ್ರಾಲಯ, ಭಾರತ ಸರ್ಕಾರ, ನವದೆಹಲಿ.
8. ಆಯುಕ್ತರು, ಕೈಗಾರಿಕಾ ತರಬೇತಿ ಮತ್ತು ಉದ್ಯೋಗ ಆಯುಕ್ತಾಲಯ, ಬೆಂಗಳೂರು.
9. ಅಭಿಯಾನ ನಿರ್ದೇಶಕರು, ಡೇ-ನಲ್ಮ್, ಬೆಂಗಳೂರು.
10. ನಿರ್ದೇಶಕರು, ಪೌರಾಡಳಿತ ನಿರ್ದೇಶನಾಲಯ, ವಿ.ವಿ.ಟವರ್, ಬೆಂಗಳೂರು.
11. ಖಜಾನಾಧಿಕಾರಿ, ರಾಜ್ಯಹುಜೂರ್ ಖಜಾನೆ, ಬೆಂಗಳೂರು.
12. ಎಲ್ಲಾ ಜಿಲ್ಲಾಧಿಕಾರಿಗಳು,
13. ಎಲ್ಲಾ ಜಿಲ್ಲಾ ಮುಖ್ಯ ಕಾರ್ಯ ನಿರ್ವಹಣಾಧಿಕಾರಿಗಳು.
14. ಆಯುಕ್ತರು/ಪೌರಾಯುಕ್ತರು/ಮುಖ್ಯಾಧಿಕಾರಿಗಳು
15. ಆರ್.ಬಿ.ಐ.ನ ರಾಜ್ಯ ಪ್ರತಿನಿಧಿ.
16. ರಾಜ್ಯ ಸಂಚಾಲಯಕರು, ಎಸ್.ಎಲ್.ಬಿ.ಸಿ..
17. ಜಿಲ್ಲಾ ಲೀಡ್ ಬ್ಯಾಂಕ್ ಮುಖ್ಯಸ್ಥರು
18. ಸಿಡ್‌ಬಿ ಯ ರಾಜ್ಯ ಪ್ರತಿನಿಧಿ
19. ರಾಜ್ಯ ಮಟ್ಟದ ಬ್ಯಾಂಕರುಗಳ ಸಮಿತಿಯ ಸಂಚಾಲಕರು
20. ಪೌರಾಯುಕ್ತರು (ಇ.ಓ.)
21. ಎನ್.ಬಿ.ಎಫ್.ಸಿ/ಎಂ.ಎಫ್.ಐ.
22. ಪ್ರದೇಶ ಮತ್ತು ನಗರ ಮಟ್ಟದ ಒಕ್ಕೂಟದ ಪ್ರತಿನಿಧಿಗಳು
23. ಸಮುದಾಯ ಸಂಘಟನಾಧಿಕಾರಿ/ ಸಮುದಾಯ ಸಂಘಟಕರು.
24. ಮಾನ್ಯ ಮುಖ್ಯಮಂತ್ರಿಯವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
25. ಮಾನ್ಯ ಉಪ ಮುಖ್ಯಮಂತ್ರಿಯವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
26. ಸರ್ಕಾರದ ಪ್ರಧಾನ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಕೌಉಜೀ ಇಲಾಖೆ
27. ಸರ್ಕಾರದ ಅಪರ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಕೌಉಜೀ ಇಲಾಖೆ
28. ಸರ್ಕಾರದ ಅಧೀನ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಕೌಉಜೀ ಇಲಾಖೆ
29. ಶಾಖಾ ರಕ್ಷ ಕಡತ /ಹೆಚ್ಚುವರಿ ಪ್ರತಿ.